ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

15

ಇಲಾಖೆ / ವಿಷಯ : DEPARTMENT / SUBJECT: ____________

ಪತ್ರಿಕೆಯ ಹೆಸರು : NAME OF THE NEWS PAPER: ____________ ದಿನಾಂಕ : DATE : 12/1/21




ಮೈಸೂರಿನ ಕಲಾಮಂದಿರದಲ್ಲಿ ನಡೆದ ಬಿಜೆಪಿ ಜನಸೇವಕ ಸಮಾರಂಭದಲ್ಲಿ ಮುಖ್ಯಮಂತ್ರಿ ಯಡಿಯೂರಪ್ಪ ಮಾತನಾಡಿದರು. ರಾಜ್ಯಾಧ್ಯಕ್ಷ ಕಟೀಲ್ ಸೇರಿದಂತೆ ಪ್ರಮುಖರನ್ನು ಕಾಣಬಹುದು

# ಗೋಮಾಂಸ ಭಕ್ಷಣೆ ಸಿದ್ದು ಸಾಧನೆ

12/1/21

ಸಂ.ಕ. ಸಮಾಚಾರ ಮೈಸೂರು

ಗೋ ಮಾಂಸ ತಿನ್ನುವುದೇ ದೊಡ್ಡ ಸಾಧನೆ ಎಂದು ಮೈಸೂರಿನ ಕಾಂಗ್ರೆಸ್ ಮುಖಂಡ ಹೇಳುತ್ತಾನೆ. ಅಂತಹವರ ಬಗ್ಗೆ ಮಾತನಾಡೋದು ನಮಗೆ ಶೋಭೆ ತರುವುದಿಲ್ಲ ಎನ್ನುವ ಮೂಲಕ ಮಾಜಿ ಸಿಎಂ ಸಿದ್ದರಾಮಯ್ಯ ಅವರನ್ನು ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಏಕವಚನದಲ್ಲಿ ಟೀಕಿಸಿ ವಾಗ್ದಾಳಿ ನಡೆಸಿದರು.

ಕಲಾಮಂದಿರದಲ್ಲಿ ಗ್ರಾಪಂ ಚುನಾವಣೆಯಲ್ಲಿ ಜಯ ಗಳಿಸಿದ ಬಿಜೆಪಿ ಬೆಂಬಲಿತ ಸದಸ್ಯರಿಗಾಗಿ ಆಯೋಜಿಸಿದ್ದ ಜನಸೇವಕ್ ಸಮಾವೇಶದಲ್ಲಿ ಮಾತನಾಡಿದರು.

ಪಕ್ಷದ ರಾಜ್ಯಾಧ್ಯಕ್ಷ ನಳೀನ್‌ಕುಮಾರ್ ಕಟೀಲ್ ಮಾತನಾಡಿ, ಜನರು ಗೆಲ್ಲಿಸಿರುವ ಪಕ್ಷದ ಬೆಂಬಲಿತರು ಅಧಿಕಾರ ದುರುಪಯೋಗ ಪಡಿಸಿಕೊಳ್ಳಬಾ. ಈ ರೀತಿ ಮಾಡಿದ್ದರಿಂದಾಗಿ ಕಾಂಗ್ರೆಸ್ ಅಧಿಕಾರ ಕಳೆದುಕೊಳ್ಳುತ್ತಿದೆ. ಈ ಕಾರಣದಿಂದಾಗಿ ರಾಜ್ಯ ಕಾಂಗ್ರೆಸ್ ಮುಕ್ತವಾಗುತ್ತಿದೆ ಎಂದು ಟೀಕಿಸಿದರು.

ಜಿಲ್ಲಾ ಉಸ್ತುವಾರಿ ಸಚಿವ ಎಸ್.ಟಿ. ಸೋಮಶೇಖರ್, ಎಂಎಲ್‌ಸಿಗಳಾದ ಎಚ್. ವಿಶ್ವನಾಥ್, ಅಶ್ವತ್ಥ್ ನಾರಾಯಣ್, ಸಂಸದ ಪ್ರತಾಪ್‌ಸಿಂಹ, ಶಾಸಕರಾದ ಎಸ್.ಎ.ರಾಮದಾಸ್, ಎಲ್.ನಾಗೇಂದ್ರ, ಸಿ.ಎಚ್.ವಿಜಯಶಂಕರ್, ಶ್ರೀವತ್ಸ, ಮಂಗಳ ಸೋಮಶೇಖರ್ ಇನ್ನಿತರರು ವೇದಿಕೆಯಲ್ಲಿದ್ದರು.

## ಸಿದ್ದುಗೆ ಗೋವುಗಳ ಶಾಪ

ಮಡಿಕೇರಿಯಲ್ಲಿ ಗ್ರಾಮೀಣ ಅಭಿವೃದ್ಧಿ ಸಚಿವ ಕೆ.ಎಸ್.ಈಶ್ವರಪ್ಪ ಮಾತನಾಡಿ, ಗೋವುಗಳ ಶಾಪದಿಂದ ಸಿದ್ದರಾಮಯ್ಯ ಅವರು ಮುಖ್ಯಮಂತ್ರಿ ಸ್ಥಾನ ಕಳೆದುಕೊಂಡರು, ಇದೇ ರೀತಿ ಹಿಂದುತ್ವದ ಬಗ್ಗೆ ಅಪಮಾನ ಮಾಡುತ್ತಲೇ ಇದ್ದರೆ ಮುಂದೆ ಕರ್ನಾಟಕದ ಯಾವುದೇ ಭಾಗದಲ್ಲಿ ಅವರು ಚುನಾವಣೆಯಲ್ಲಿ ಗೆಲ್ಲಲು ಸಾಧ್ಯವಿಲ್ಲ ಎಂದು ಕಿಡಿ ಕಾರಿದರು.

ಸುದ್ದಿಗಾರರೊಡನೆ ಮಾತನಾಡಿದ ಸಚಿವರು, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಚಾಮುಂಡೇಶ್ವರಿ ಕ್ಷೇತ್ರದಲ್ಲಿ ಸೋಲುಂಡರು, ರಾಜ್ಯದಲ್ಲಿ ಕರ್ನಾಟಕದಲ್ಲಿ ಕಾಂಗ್ರೆಸ್ ಸರ್ಕಾರವನ್ನು ಕಳೆದುಕೊಂಡಿದ್ದಾರೆ. ಆಕಸ್ಮಿಕವಾಗಿ ಬಾದಾಮಿಯಲ್ಲಿ ಕಡಿಮೆ ಅಂತರದಲ್ಲಿ ಗೆಲುವು ಸಾಧಿಸಿದ್ದಾರೆ ಎಂದು ವ್ಯಂಗ್ಯವಾಡಿದರು.